# ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ

"ಸಾರಿಗೆ ಭವನ" ಕೇಂದ್ರ ಕಛೇರಿ, ಕೆ.ಹೆಚ್.ರಸ್ತೆ, ಶಾಂತಿ ನಗರ, ಬೆಂಗಳೂರು-560 027.
ಸಂಚಾರ (ವಾಣಿಜ್ಯ) ಇಲಾಖೆ.

ಸಂ:ಕರಾಸಾ:ಕೇಕ:ಸಂ:ಸಿ2:1507(ಭಾಗ-7): 1353 :2020-21 ದಿನಾಂಕ: 10.12.2020

## ಸುತ್ತೋಲೆ

ವಿಷಯ: ದಿನಾಂಕ: 31.12.2020 ರವರೆಗೆ ಪದವಿ / ಸ್ನಾತಕೋತ್ತರ / ಡಿಪ್ಲೋಮಾ / ತಾಂತ್ರಿಕ / ವೈದ್ಯಕೀಯ ಕಾಲೇಜು / ವಿದ್ಯಾರ್ಥಿಗಳಿಗೆ ನಿಗಮ ವಾಹನಗಳಲ್ಲಿ ಪ್ರಯಾಣಿಸಲು ಅವಕಾಶ ಕಲ್ಪಿಸಿರುವ ಬಗ್ಗೆ.

ಉಲ್ಲೇಖ: 1. ಸರ್ಕಾರದ ಆದೇಶ ಸಂಖ್ಯೆ: ಇಡಿ 33 ಯು ಎನ್ ಇ 2020, ಬೆಂಗಳೂರು ದಿನಾಂಕ: 09.11.2020.

2. ಸುತ್ತೋಲೆ-1579/2020 ದಿನಾಂಕ: 13.11.2020.
3. ಸಂ:ಕರಾಸಾ:ಕೇಕ:ಸಂ:ಸಿ2:1507(ಭಾಗ-7):1174:2020-21 ದಿನಾಂಕ: 18.11.2020.
4. ಸೂಕ್ತಾಧಿಕಾರಿಗಳ ಆದೇಶದ ದಿನಾಂಕ: 09.12.2020

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯದ ವಿಶ್ವವಿದ್ಯಾಲಯಗಳು / ಖಾಸಗಿ ವಿಶ್ವವಿದ್ಯಾಲಯ / ಸರ್ಕಾರಿ / ತಾಂತ್ರಿಕ / ಡಿಪ್ಲೋಮಾ / ಅನುದಾನ / ಅನುದಾನ ರಹಿತ ಕಾಲೇಜುಗಳಲ್ಲಿ 2020-21ನೇ ಶೈಕ್ಷಣಿಕ ಚಟುವಟಿಕೆಗಳನ್ನು ದಿನಾಂಕ: 17.11.2020 ರಿಂದ ಪ್ರಾರಂಭಿಸಲು ಉಲ್ಲೇಖ-1ರ ಸರ್ಕಾರದ ಆದೇಶದಲ್ಲಿ ಸೂಚಿಸಿದ್ದರಿಂದ, ಉಲ್ಲೇಖಿತ-3 ರ ಸುತ್ತೋಲೆಯನ್ವಯ 2019-20ನೇ ಸಾಲಿನಲ್ಲಿ ವಿತರಣೆಯಾಗಿರುವ ವಿದ್ಯಾರ್ಥಿಗಳ ಬಸ್ ಪಾಸುಗಳನ್ನು ದಿನಾಂಕ: 10.12.2020 ರವರೆಗೆ ನಿಗಮದ ಬಸ್ಸುಗಳಲ್ಲಿ ಮಾನ್ಯ ಮಾಡಲು ಕ್ರಮಕೈಗೊಳ್ಳಲಾಗಿತ್ತು.

ಮುಂದುವರೆದು, ವಿದ್ಯಾರ್ಥಿಗಳು ಸೇವಾಸಿಂಧು ಪೋರ್ಟಲ್‌ನಲ್ಲಿ ಅರ್ಜಿ ಸಲ್ಲಿಸಿ, ಪೂರ್ಣ ಪ್ರಮಾಣದಲ್ಲಿ ವಿದ್ಯಾರ್ಥಿಗಳು ಉಚಿತ / ರಿಯಾಯಿತಿ ಬಸ್ ಪಾಸ್ ಪಡೆದಿರುವುದಿಲ್ಲ, ಆದ್ದರಿಂದ ಈ ಸಂಬಂಧ 2019-20ನೇ ಸಾಲಿನಲ್ಲಿ ವಿತರಣೆಯಾಗಿರುವ ಪದವಿ / ಸ್ನಾತಕೋತ್ತರ / ಡಿಪ್ಲೋಮಾ / ತಾಂತ್ರಿಕ / ವೈದ್ಯಕೀಯ ಕಾಲೇಜು ವಿದ್ಯಾರ್ಥಿಗಳ ಬಸ್ ಪಾಸುಗಳನ್ನು **"31ನೇ ಡಿಸೆಂಬರ್ 2020 ರವರೆಗೆ"** ನಿಗಮದ ಬಸ್ಸುಗಳಲ್ಲಿ ಮಾನ್ಯ ಮಾಡಲು ಕ್ರಮಕೈಗೊಳ್ಳುವುದು.

ಅದರನ್ವಯ ಮೇಲ್ಕಂಡ ವರ್ಗದ ವಿದ್ಯಾರ್ಥಿಗಳು ಪ್ರಸಕ್ತ ವರ್ಷದಲ್ಲಿ ಕಾಲೇಜುಗಳಿಗೆ ದಾಖಲಾಗಿರುವ ಸಂಬಂಧದ ಪ್ರಸಕ್ತ ವರ್ಷದ ಶುಲ್ಕ ಪಾವತಿ ರಶೀದಿಯೊಂದಿಗೆ, 2019-20ನೇ ಸಾಲಿನ ವಿದ್ಯಾರ್ಥಿ ಬಸ್‌ಪಾಸ್ ತೋರಿಸಿ ಸಂಬಂಧಪಟ್ಟ ಮಾರ್ಗದಲ್ಲಿ ಕರಾರಸಾ ನಿಗಮದ ನಗರ, ಹೊರವಲಯ, ಸಾಮಾನ್ಯ ಹಾಗೂ ವೇಗದೂತ ಬಸ್ಸುಗಳಲ್ಲಿ ಪ್ರಯಾಣಿಸಲು ಅವಕಾಶ ಕಲ್ಪಿಸಿದೆ.

ಈ ಬಗ್ಗೆ ಎಲ್ಲಾ ಚಾಲನಾ ಸಿಬ್ಬಂದಿಗಳಿಗೆ ತಪ್ಪದೇ ಮಾಹಿತಿ ಒದಗಿಸಲು ಕ್ರಮಕೈಗೊಂಡು ಯಾವುದೇ ದೂರುಗಳಿಗೆ ಅವಕಾಶ ನೀಡದಂತೆ ಕ್ರಮವಹಿಸಲು ಹಾಗೂ ಈ ಸಂಬಂಧ ಅನುಸರಣಾ ವರದಿಯನ್ನು ಕಳುಹಿಸಲು ಕೋರಲಾಗಿದೆ.

ಮುಖ್ಯ ಸಂಚಾರ ವ್ಯವಸ್ಥಾಪಕರು (ವಾ)

✓ಪ್ರತಿಯನ್ನು ವಂದನಾಪೂರ್ವಕವಾಗಿ:

1. ಮಾನ್ಯ ಅಧ್ಯಕ್ಷರು, / ಮಾನ್ಯ ಉಪಾಧ್ಯಕ್ಷರು, ಕರಾರಸಾ ನಿಗಮ, ರವರ ಆಪ್ತ ಕಾರ್ಯದರ್ಶಿಗಳು, ಕೇಂದ್ರ ಕಛೇರಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಲಾಗಿದೆ.
2. ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು / ನಿರ್ದೇಶಕರು (ಭ&ಜಾ) / (ಸಿ&ಪ) ಕ.ರಾ.ರ.ಸಾ.ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಲಾಗಿದೆ.
3. ಮುಖ್ಯ ಸಂಚಾರ ವ್ಯವಸ್ಥಾಪಕರು, ವಾ.ಕ.ರ.ಸಾ.ಸಂಸ್ಥೆ / ಈ.ಕ.ರ.ಸಾ.ಸಂಸ್ಥೆ, ಕೇಂದ್ರ ಕಛೇರಿ, ಹುಬ್ಬಳ್ಳಿ / ಕಲಬುರ್ಗಿ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ.
4. ಮುಖ್ಯ ಸಂಚಾರ ವ್ಯವಸ್ಥಾಪಕರು (ಕಾ), ಕ.ರಾ.ರ.ಸಾ. ನಿಗಮ, ಕೇಂದ್ರ ಕಛೇರಿ ಬೆಂಗಳೂರು ರವರ ಮಾಹಿತಿಗಾಗಿ ಹಾಗೂ ಅಗತ್ಯ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ.
5. ಎಲ್ಲಾ ಇಲಾಖಾ ಮುಖ್ಯಸ್ಥರು, ಕ.ರಾ.ರ.ಸಾ. ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಲಾಗಿದೆ.
6. ಎಲ್ಲಾ ವಿಭಾಗೀಯ ನಿಯಂತ್ರಣಾಧಿಕಾರಿಗಳು, ಕ.ರಾ.ರ.ಸಾ. ನಿಗಮ, ರವರ ಮಾಹಿತಿಗಾಗಿ ಹಾಗೂ ಅಗತ್ಯ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ.
7. ಎಲ್ಲಾ ವಿಭಾಗೀಯ ಸಂಚಲನಾಧಿಕಾರಿಗಳು / ತನಿಖಾಧಿಕಾರಿಗಳು ಕ.ರಾ.ರ.ಸಾ. ನಿಗಮ, ರವರ ಮಾಹಿತಿಗಾಗಿ ಹಾಗೂ ಅಗತ್ಯ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ.

ಮುಖ್ಯ ಸಂಚಾರ ವ್ಯವಸ್ಥಾಪಕರು (ವಾ)